# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2131 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| 3) | ಉತ್ತರಿಸಬೇಕಾದ ದಿನಾಂಕ | 30/03/2020 |
| 4) | ಉತ್ತರಿಸುವವರು | ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

************

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ ಸಾಲಿನಲ್ಲಿ ವಿವಿಧ ತಾಲ್ಲೂಕುಗಳ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳ ತಾಂತ್ರಿಕ ವಿದ್ಯಾಭ್ಯಾಸಕ್ಕಾಗಿ ಎಷ್ಟು ಸರ್ಕಾರಿ ಐ.ಟಿ.ಐ. ಕಾಲೇಜುಗಳನ್ನು ಪ್ರಾರಂಭಿಸಲಾಗಿದೆ; (ಪೂರ್ಣ ವಿವರ ನೀಡುವುದು) | ರಾಜ್ಯದಲ್ಲಿ 2018-19 ಮತ್ತು 2019-2020 ನೇ ಸಾಲಿನಲ್ಲಿ ಯಾವುದೇ ಸರ್ಕಾರಿ ಹೊಸ ಐ.ಟಿ.ಐ. ಕಾಲೇಜುಗಳನ್ನು ಪ್ರಾರಂಭಿಸಿರುವುದಿಲ್ಲ. |
| ಆ) | ಕಳೆದ 3 ವರ್ಷಗಳಿಂದ ಸದರಿ ಐ.ಟಿ.ಐ. ಕಾಲೇಜುಗಳಲ್ಲಿ ಪ್ರಮುಖ ಹುದ್ದೆಗಳಾದ ಕಾಲೇಜಿನ ಪ್ರಾಂಶುಪಾಲರು, ಹಿರಿಯ ಮತ್ತು ಕಿರಿಯ ತರಬೇತಿ ಉಪನ್ಯಾಸಕರ ಹುದ್ದೆಗಳು ಮತ್ತು ಬೋಧಕೇತರ ಹುದ್ದೆಗಳು ಖಾಲಿ ಇರುವುದರಿಂದ ಮತ್ತು ಅಗತ್ಯವಿರುವ ಕಂಪ್ಯೂಟರ್ ಲ್ಯಾಬ್, ವಿದ್ಯಾರ್ಥಿಗಳು ಕುಳಿತುಕೊಳ್ಳಲು ಬೇಕಾಗುವ ಡೆಸ್ಕ್ ಟೇಬಲ್ ಮತ್ತು ಇತರೆ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಗ್ರಾಮೀಣ ವಿದ್ಯಾರ್ಥಿಗಳಿಗೆ ತಾಂತ್ರಿಕ ವ್ಯಾಸಂಗಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಪೂರ್ಣ ವಿವರ ನೀಡುವುದು | ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಹಾಗೂ ಬಡ್ತಿಗಾಗಿ ಖಾಲಿ ಇರುವ ಹುದ್ದೆಗಳಿಗೆ ಏಪ್ರಿಲ್ 2020 ರಲ್ಲಿ ಮುಂಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದು.<br><br>ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ರಾಷ್ಟ್ರೀಯ ವೃತ್ತಿ ಶಿಕ್ಷಣ ಪರಿಷತ್ತಿನ ಪಠ್ಯಕ್ರಮದನುಸಾರ ಪೀಠೋಪಕರಣ, ಯಂತ್ರೋಪಕರಣ, Reference ಪುಸ್ತಕಗಳನ್ನು ಹಾಗೂ ಕಚೇರಿ ಉಪಯೋಗಕ್ಕಾಗಿ ಅಗತ್ಯವಿದ್ದ ಕಂಪ್ಯೂಟರ್‌ಗಳನ್ನು ಒದಗಿಸಲಾಗಿರುತ್ತದೆ. ಹೆಚ್ಚುವರಿ ಸೌಲಭ್ಯಗಳು ಅಗತ್ಯವಿದ್ದಲ್ಲಿ ಅವುಗಳನ್ನು ಖರೀದಿಸಿ ಒದಗಿಸಲು ಕ್ರಮವಹಿಸಲಾಗುವುದು. |

--2

| | | |
|---|---|---|
| ಇ) | ಐ.ಟಿ.ಐ. ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರು, ಬೋಧಕ/ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಅವಶ್ಯಕ ಮೂಲಭೂತ ಸೌಕರ್ಯಗಳಾದ ಕಂಪ್ಯೂಟರ್ ಲ್ಯಾಬ್ ಅಂದರೆ, ಕಂಪ್ಯೂಟರ್, ಪ್ರಿಂಟರ್, ಕಂಪ್ಯೂಟರ್ ಟೇಬಲ್‌ಗಳು ಹಾಗೂ ಇನ್ನಿತರೆ ಸಾಮಗ್ರಿಗಳು, ವಿದ್ಯಾರ್ಥಿಗಳಿಗೆ ಕುಳಿತುಕೊಳ್ಳಲು ಬೇಕಾಗುವ ಡೆಸ್ಕ್‌ಗಳು, ಗ್ರಂಥಾಲಯದಲ್ಲಿ ಅಗತ್ಯವಿರುವ Reference ಪುಸ್ತಕಗಳನ್ನು ಒದಗಿಸಲು ಸರ್ಕಾರ ಆಯವ್ಯಯದಲ್ಲಿ ಅಳವಡಿಸಿರುವ ಅನುದಾನವೆಷ್ಟು? (ಪೂರ್ಣ ವಿವರ ನೀಡುವುದು) | ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಐ.ಟಿ.ಐ. ಕಾಲೇಜುಗಳಲ್ಲಿ ಖಾಲಿ ಇರುವ ಕೆಳಕಂಡ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>1) ಪ್ರಾಚಾರ್ಯರು ದರ್ಜೆ-2- 36,<br>2) ಕಿರಿಯ ತರಬೇತಿ ಅಧಿಕಾರಿ-1520<br>3) ಪ್ರಥಮ ದರ್ಜೆ ಸಹಾಯಕರು-78<br>4) ಹೈದ್ರಾಬಾದ್ ಕರ್ನಾಟಕದ ಪ್ರಥಮ ದರ್ಜೆ ಸಹಾಯಕರು-15<br>5) ಹೈದ್ರಾಬಾದ್ ಕರ್ನಾಟಕದ ದ್ವಿತೀಯ ದರ್ಜೆ ಸಹಾಯಕರು- 13<br>6) ಹೈದ್ರಾಬಾದ್ ಕರ್ನಾಟಕದ ಶೀಘ್ರಲಿಪಿಗಾರರ-01 ಹುದ್ದೆ ಮತ್ತು<br>7) ಹೈದ್ರಾಬಾದ್ ಕರ್ನಾಟಕದ ಬೆರಳಚ್ಚುಗಾರರ 02 ಹುದ್ದೆಗಳು<br><br>ಮುಂದುವರೆದು, ಉಳಿದಂತೆ ಮುಂಬಡ್ತಿ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ಏಪ್ರಿಲ್‌ನಲ್ಲಿ ನಿಗಧಿಪಡಿಸಲಾಗಿದೆ.<br><br>ರಾಜ್ಯದ ಸರ್ಕಾರಿ ಐ.ಟಿ.ಐ. ಗಳಿಗೆ ಕಂಪ್ಯೂಟರ್ ಲ್ಯಾಬ್ ಅಂದರೆ, ಕಂಪ್ಯೂಟರ್, ಪ್ರಿಂಟರ್, ಕಂಪ್ಯೂಟರ್ ಟೇಬಲ್‌ಗಳು ಹಾಗೂ ಇನ್ನಿತರೆ ಸಾಮಗ್ರಿಗಳನ್ನು ಡಿ.ಜಿ.ಟಿ. ಪಠ್ಯಕ್ರಮದನುಸಾರ ಒದಗಿಸಲು 2020-2021 ನೇ ಸಾಲಿನ ಆಯವ್ಯಯದಲ್ಲಿ ರೂ. 40 ಕೋಟಿಗಳ ಅನುದಾನವನ್ನು ನಿಗದಿಗೊಳಿಸಲಾಗಿದೆ. |

**ಸಂಖ್ಯೆ: ಕೌಉಜೀಇ 32 ಕೈತಪ್ರ 2020**

**(ಡಾ.ಸಿ.ಎನ್.ಅಶ್ವತ್ಥ ನಾರಾಯಣ)**
**ಉಪ ಮುಖ್ಯಮಂತ್ರಿಗಳು ಹಾಗೂ**
**ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು**
**ಜೀವನೋಪಾಯ ಸಚಿವರು**